For More Job News Visit : www.kscvaani.com

ಮಂಡ್ಯ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ.,

ಹಾಲು ಉತ್ಪನ್ನ ಘಟಕ, ಗೆಜ್ಜಲಗೆರೆ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ – 571428

ಸಂಖ್ಯೆ: ಮಂಹಾಒ/ಆಡಳಿತ/ಬ್ಯಾಕ್‌ಲಾಗ್ ನೇಮಕಾತಿ/550ಡಿ/2021-22 ದಿನಾಂಕ: 25-01-2022

ಬ್ಯಾಕ್‌ಲಾಗ್ ನೇಮಕಾತಿ ಪ್ರಕಟಣೆ

ಮಂಡ್ಯ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಹಾಲು ಉತ್ಪನ್ನ ಘಟಕ, ಗೆಜ್ಜಲಗೆರೆ ಇದರ ಈ ಕೆಳಕಂಡ ಬ್ಯಾಕ್‌ಲಾಗ್ ಹುದ್ದೆಗಳಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕ್ರ ಸಂ	ಹುದ್ದೆಗಳ ವಿವರ	ವೇತನ ಶ್ರೇಣಿ ರೂ.	ಹುದ್ದೆಗಳ ಸಂಖ್ಯೆ	ಮೀಸಲಾತಿ		ವಿದ್ಯಾರ್ಹತೆ
				ಪ.ಜಾ	ಪ.ಪಂ	
01	ಸಹಾಯಕ ವ್ಯವಸ್ಥಾಪಕರು (ಪ.ವೈ.ಸೇ/ಕೃ.ಗ)	52650-97100	02	ಇ-01	ಮ-01	ಕಾನೂನು ರೀತ್ಯಾ ಮಾನ್ಯತೆ ಪಡೆದ ಪಶು ವೈದ್ಯಕೀಯ ವಿಶ್ವವಿದ್ಯಾಲಯದಿಂದ ಬಿ.ವಿ.ಎಸ್ಸಿ ಮತ್ತು ಎ.ಹೆಚ್ ಪದವಿಯನ್ನು ಹೊಂದಿರತಕ್ಕದ್ದು.
02	ತಾಂತ್ರಿಕ ಅಧಿಕಾರಿ(ಡಿ.ಟಿ)	43100-83900	02	ಗ್ರಾ-01	ಇ-01	ಕಾನೂನು ರೀತ್ಯಾ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಎಸ್ಸಿ(ಡಿ.ಟಿ)/ ಬಿ.ಟೆಕ್(ಡಿ.ಟೆಕ್) ಪದವಿ ಹೊಂದಿರತಕ್ಕದ್ದು. ಕಂಪ್ಯೂಟರ್ ನಿರ್ವಹಣೆ ಜ್ಞಾನ ಕಡ್ಡಾಯವಾಗಿ ಹೊಂದಿರಬೇಕು.

ಇ-ಇತರೆ ಅಭ್ಯರ್ಥಿ, ಮ-ಮಹಿಳಾ ಅಭ್ಯರ್ಥಿ, ಗ್ರಾ-ಗ್ರಾಮೀಣ ಅಭ್ಯರ್ಥಿ

1) **ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ 18 ವರ್ಷ ತುಂಬಿರಬೇಕು ಮತ್ತು 40 ವರ್ಷಗಳನ್ನು ಮೀರಿರಬಾರದು.**

2) **ಕನ್ನಡ ಭಾಷಾಜ್ಞಾನ(ಓದುವುದು ಮತ್ತು ಬರೆಯುವುದು) ಕಡ್ಡಾಯವಾಗಿರುತ್ತದೆ.**

3) **ಅರ್ಹ ಮಹಿಳಾ, ಗ್ರಾಮೀಣ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅದೇ ವರ್ಗದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.**

ಅರ್ಜಿ ಸಲ್ಲಿಸುವ ವಿಧಾನ: ಅರ್ಜಿಯನ್ನು ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ ಸ್ವಂತ ವಿವರದೊಂದಿಗೆ ಅಂದವಾಗಿ ಬೆರಳಚ್ಚು ಮಾಡಿ ಇತ್ತೀಚಿನ ಭಾವಚಿತ್ರ 02(ಎರಡು), ವಿದ್ಯಾರ್ಹತೆ, ವಯಸ್ಸು, ಜಾತಿ ಬಗ್ಗೆ ಪ್ರಮಾಣಪತ್ರಗಳ ಸ್ವಯಂ ದೃಢೀಕೃತ ಜೆರಾಕ್ಸ್ ಪ್ರತಿಯೊಂದಿಗೆ ರೂ. 600/- ಮೌಲ್ಯದ ಡಿ.ಡಿ ಯನ್ನು **"ವ್ಯವಸ್ಥಾಪಕ ನಿರ್ದೇಶಕರು, ಮಂಡ್ಯ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ, ಹಾಲು ಉತ್ಪನ್ನ ಘಟಕ ಗೆಜ್ಜಲಗೆರೆ"** ಇವರಿಗೆ ಸಂದಾಯವಾಗುವಂತೆ ಪಡೆದು ದಿನಾಂಕ: 02-03-2022 ರ ರೊಳಗೆ ವ್ಯವಸ್ಥಾಪಕ ನಿರ್ದೇಶಕರು, ಮಂಡ್ಯ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ, ಹಾಲು ಉತ್ಪನ್ನ ಘಟಕ ಗೆಜ್ಜಲಗೆರೆ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ-571428 ಈ ವಿಳಾಸಕ್ಕೆ ತಲುಪುವಂತೆ ಕಳುಹಿಸತಕ್ಕದ್ದು ಅರ್ಜಿ ಸಲ್ಲಿಸುವ ಲಕೋಟೆ ಮೇಲೆ ಹುದ್ದೆಯ ವಿವರ ಸ್ಪಷ್ಟವಾಗಿ ನಮೂದಿಸಿರಬೇಕು. ದಿನಾಂಕ: 02-03-2022 ರ ನಂತರ ಬಂದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

ಆಯ್ಕೆ ವಿಧಾನ: ಈ ಹುದ್ದೆಗಳಿಗೆ ಆಯ್ಕೆಯನ್ನು ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್:13:ಎಸ್‌ಬಿಸಿ:2001, ದಿನಾಂಕ:21-11-2001ರ ಬ್ಯಾಕ್‌ಲಾಗ್ ನೇಮಕಾತಿ ನಿಯಮಾವಳಿಯಂತೆ ಮಾಡಲಾಗುವುದು.

ಸಹಿ/-
ವ್ಯವಸ್ಥಾಪಕ ನಿರ್ದೇಶಕರು
ಮಂಡ್ಯ ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ.,